ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಮಾನ್ವಿ ಪಟ್ಟಣಕ್ಕೆ ಮಂಜೂರಾಗಿರುವ ಕುಡಿಯುವ ನೀರಿನ ಸರಬರಾಜು ಯೋಜನೆ ಬಗ್ಗೆ

ಶ್ರೀ ಎನ್. ಎಸ್.ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

1518 (1870) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣಕ್ಕೆ 24/7 ಕುಡಿಯುವ ನೀರಿನ ಸರಬರಾಜು ಯೋಜನೆಯ ಕಾಮಗಾರಿಯು ಯಾವ ವರ್ಷದಲ್ಲಿ ಮಂಜೂರಾಗಿದೆ; ಈ ಯೋಜನೆಗೆ ಮಂಜೂರಾಗಿರುವ ಅನುದಾನ ಎಷ್ಟು; ಸದರಿ ಯೋಜನೆಗೆ ಖರ್ಚು ಮಾಡಿರುವ ಅನುದಾನ ಎಷ್ಟು; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿ ಇದೆ; ಸದರಿ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ;

(ಆ) ಮಾನ್ವಿ ಪಟ್ಟಣದಲ್ಲಿ ಕುಡಿಯುವ ನೀರಿನ ವಿತರಣೆ ಜಾಲಗಳನ್ನು ಬದಲಾವಣೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; ಈ ಯೋಜನೆಯ ಅಂದಾಜು ಮೊತ್ತ ಎಷ್ಟು?